**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.331/2021**

ಪಿ.ಡಬ್ಲ್ಯೂ: 9

ಸಿ.ಡಬ್ಲ್ಯೂ: 8

ಸಾಕ್ಷಿದಾರರ ಹೆಸರು : ನಾಗರಾಜ್

ತಂದೆಯ ಹೆಸರು: :ರಂಗಪ್ಪ

ವಯಸ್ಸು : **44 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಕೃಷ್ಣಾಪುರ ಗ್ರಾಮ

**ದಿನಾಂಕ: 09-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಎರಡು ವರ್ಷಗಳ ಹಿಂದೆ ಮಧ್ಯಾಹ್ನ 12-00 ಗಂಟೆ ಸಮಯದಲ್ಲಿ ನಾನು ಕೆಂಚಾಪುರದ ಗೇಟ್ ಹತ್ತಿರ ಅಪಘಾತದ ವಿಚಾರವಾಗಿ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ತಿಳಿದಿರುತ್ತದೆ. ಲಿಂಗದಹಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ಇನ್ನೊಂದು ವಾಹನ ಅಮಾನತ್ತು ಮಹಜರ್ ಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಟಿ ವಿ ಎಸ್ ಬೈಕ್ ನ್ನು ಪೊಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲಾತಿಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-4 ಮತ್ತು 5 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ವಾಹನ ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲಾತಿಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು : ಆರೋಪಿ ಪರ</u>** ಶ್ರೀ ಕೆ ಪಿ **<u>ವಕೀಲರಿಂದ.</u>**

ಪೊಲೀಸರ ಕೋರಿಕೆಯ ಮೇರೆಗೆ ಮಹಜರ್ ಗೆ ಸಹಿ ಮಾಡಿರುತ್ತೇನೆ, ಅದರಲ್ಲಿ ಬರೆದ ವಿಚಾರ ನನಗೆ ತಿಳಿದಿರುವುದಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ಛಾಯಚಿತ್ರವನ್ನು ತೆಗೆಸಿಕೊಂಡಿರುತ್ತೇನೆಂದರೆ ಸರಿ.

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**